**Akashvani : Bangalore**
**Regional Bulletin In Kannada**
**27.02.2026 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ರಾಜ್ಯದಲ್ಲಿ ದರಕಾಸ್ತು, ಪೋಡಿ, ಪೌತಿ ಖಾತೆ ಆಂದೋಲನದಿಂದ ನೈಜ ವಾರಸುದಾರರಿಗೆ ಅನುಕೂಲ - ಕಂದಾಯ ಸಚಿವ ಕೃಷ್ಣ ಬೈರೇಗೌಡ**

**೨. ರಾಜ್ಯಕ್ಕೆ ಪ್ರಸ್ತುಕ ಹಣಕಾಸು ವರ್ಷದಲ್ಲಿ ೪.೯೯ ಲಕ್ಷ ಕೋಟಿ ಆದ್ಯತಾ ವಲಯದ ಸಾಲ ಸಾಮರ್ಥ್ಯ ಅಂದಾಜಿಸಿದ ನಬಾರ್ಡ್**

**೩. ನಾಳೆಯಿಂದ ದ್ವಿತೀಯ ಪಿಯುಸಿ ಪರೀಕ್ಷೆ ಆರಂಭ ; ೬ ಲಕ್ಷದ ೧೦ ಸಾವಿರ ವಿದ್ಯಾರ್ಥಿಗಳಿಂದ ನೋಂದಣಿ**

**೪. ಬೆಂಗಳೂರಿನಲ್ಲಿ ಏಪ್ರಿಲ್ ೧ ರಂದು ವಿಶ್ವ ವಿಖ್ಯಾತ ಕರಗ ಶಕ್ತ್ಯೋತ್ಸವ**

**೫. ರಣಜಿ ಟ್ರೋಫಿ ಫೈನಲ್ ಹಣಾಹಣಿ ; ಕರ್ನಾಟಕ ವಿರುದ್ಧ ಜಮ್ಮು-ಕಾಶ್ಮೀರಕ್ಕೆ ೪೬೬ ರನ್‌ಗಳ ಮುನ್ನಡೆ**

**<><*<><>*><>**

ಹಲವು ದಶಕಗಳಿಂದ ಇತ್ಯರ್ಥವಾಗದೇ ಬಾಕಿ ಉಳಿದಿದ್ದ ದರಕಾಸ್ತು ಪೋಡಿ, ಪೌತಿ ಖಾತೆ, ಕಂದಾಯ ಗ್ರಾಮ ರಚನೆ ಮತ್ತಿತರ ಸಮಸ್ಯೆಗಳನ್ನು ಪರಿಹರಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರದಲ್ಲಿ ೨೫ ಸಾವಿರ  ಕಂದಾಯ ಸೇವೆಗಳ ಸಮರ್ಪಣಾ ಸಮಾವೇಶ ಉದ್ಘಾಟಿಸಿ ಫಲಾನುಭವಿಗಳಿಗೆ ಕಂದಾಯ ಇಲಾಖೆಯ ವಿವಿಧ ಹಕ್ಕುಪತ್ರ ಗಳನ್ನು ವಿತರಿಸಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ೧ ಸಾವಿರ ದಿನಗಳಲ್ಲಿ ಕಂದಾಯ ಇಲಾಖೆಯಲ್ಲಿ ಕೈಗೊಂಡ ಕ್ರಮಗಳ ಫಲವಾಗಿ ಹತ್ತು ಹಲವು ಸುಧಾರಣೆಗಳಾಗಿದೆ ಎಂದು ತಿಳಿಸಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಮಾತನಾಡಿ, ಸಚಿವ ಕೃಷ್ಣ ಬೈರೇಗೌಡ ನೇತೃತ್ವದಲ್ಲಿ ಕಂದಾಯ ಇಲಾಖೆ ಮಹತ್ತರ ಮತ್ತು ಕ್ರಾಂತಿಕಾರಕ ಬದಲಾವಣೆಗಳನ್ನು ಕಂಡಿದೆ ಎಂದು ಹೇಳಿದ್ದಾರೆ.

**<><*<><>*><>**

ಕರ್ನಾಟಕ ರಾಜ್ಯ ಸಂಶೋಧನೆಯ ನೂತನ ಆವಿಷ್ಕಾರಗಳಿಗೆ, ಉದ್ಯೋಗಿಗಳಿಗೆ ಹಾಗೂ ಪ್ರತಿಭಾವಂತರಿಗೆ ಕಾಯಕ ಭೂಮಿಯಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ಜಿಎಎಫ್‌ಎಕ್ಸ್ ಸಮ್ಮೇಳನದಲ್ಲಿ ಮಾತನಾಡಿದ ಅವರು, ೨೦೨೮ರ ವೇಳೆಗೆ ಸುಮಾರು ೫೦ ಸಾವಿರದ ವಿದ್ಯಾರ್ಥಿಗಳಿಗೆ ತರಬೇತಿ ನೀಡುವ ಗುರಿ ಹೊಂದಲಾಗಿದೆ. ೭ ಲಕ್ಷದ ೭೦ ಸಾವಿರ ಉದ್ಯೋಗಿಗಳಿಗೆ ೨೦೨೩-೨೪ರಲ್ಲಿ ಕೃತಕಬುದ್ಧಿಮತ್ತೆ ಮತ್ತು ಕೌಶಲ್ಯಗಳ ಕುರಿತು ತರಬೇತಿ ನೀಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಇದೇ ವೇಳೆ ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ, ಕರ್ನಾಟಕವು ಎವಿಜಿಸಿ-ಎಕ್ಸ್‌ಆರ್ ನೀತಿಯನ್ನು ಪರಿಚಯಿಸಿದ ಮೊದಲ ರಾಜ್ಯವಾಗಿದ್ದು, ಭಾರತದ ಎವಿಜಿಸಿ ವಲಯದ ಶೇಕಡ ೨೦ಕ್ಕಿಂತ ಹೆಚ್ಚು ಪಾಲನ್ನು ಹೊಂದಿದೆ ಎಂದು ಹೇಳಿದ್ದಾರೆ.

**<><*<><>*><>**

ನಾಳೆಯಿಂದ ರಾಜ್ಯಾದ್ಯಂತ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳು ಆರಂಭವಾಗಲಿದೆ. ಎಲ್ಲಾ ಜಿಲ್ಲೆಗಳಲ್ಲಿ ಪರೀಕ್ಷೆ ಸುಗಮವಾಗಿ ನಡೆಸಲು ಶಿಕ್ಷಣ ಇಲಾಖೆ ಸಿದ್ಧತೆ ಪೂರ್ಣಗೊಳಿಸಿದೆ. ಈ ಬಾರಿ ೫ ಸಾವಿರದ ೧೬೪ ಕಾಲೇಜುಗಳ ೬ ಲಕ್ಷದ ೧೦ ಸಾವಿರ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ನೋಂದಣಿ ಮಾಡಿಕೊಂಡಿದ್ದಾರೆ. ವಿಜ್ಞಾನ ವಿಷಯದಲ್ಲಿ ೨ ಲಕ್ಷದ ೯೨ ಸಾವಿರ, ವಾಣಿಜ್ಯ ೨ ಲಕ್ಷದ ೧೧ ಸಾವಿರ, ಕಲಾವಿಭಾಗದಲ್ಲಿ ೧ ಲಕ್ಷದ ೪೨ ಸಾವಿರ ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಲಿದ್ದಾರೆ. ಒಂದು ಸಾವಿರದ ೨೧೬ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆ ನಡೆಯಲಿದ್ದು, ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಸಲಾಗಿದೆ. ಮೊದಲ ದಿನವಾದ ನಾಳೆ ಕನ್ನಡ, ಅರೆಬಿಕ್ ಭಾಷಾ ಪರೀಕ್ಷೆಗಳು ನಡೆಯಲಿವೆ. ವಿದ್ಯಾರ್ಥಿಗಳು ಯಾವುದೇ ಭಯವಿಲ್ಲದೆ ಪರೀಕ್ಷೆಯನ್ನು

ಆತ್ಮವಿಶ್ವಾಸದಿಂದ ಎದುರಿಸುವುದು ಅತ್ಯಂತ ಮುಖ್ಯ. ಪರೀಕ್ಷೆಯನ್ನು ಒಂದು ಅವಕಾಶವೆಂದು ಪರಿಗಣಿಸಿ, ಸಮರ್ಪಕವಾದ ಉತ್ತರಗಳನ್ನು ಬರೆಯುವ ಮೂಲಕ ಪಿಯುಸಿ ಪರೀಕ್ಷೆಯಲ್ಲಿ ಯಶಸ್ಸು ಸಾಧಿಸಬೇಕೆಂದು ಧಾರವಾಡ ಜಿಲ್ಲಾಧಿಕಾರಿ ಸ್ನೇಹಲ್ ಆರ್. ವಿದ್ಯಾರ್ಥಿಗಳಿಗೆ ಶುಭ ಹಾರೈಸಿದ್ದಾರೆ.

<><*<><>*><>

ರಾಜ್ಯದ ಅಭಿವೃದ್ಧಿಯಲ್ಲಿ ನಬಾರ್ಡ್ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಆಯೋಜಿಸಲಾಗಿದ್ದ ೨೦೨೬-೨೭ನೇ ಸಾಲಿನ ರಾಜ್ಯ ಸಾಲ ವಿಚಾರ ಸಂಕಿರಣದ ಅಧ್ಯಕ್ಷತೆ ವಹಿಸಿದ್ದ ಅವರು, ಪ್ರಸ್ತುತ ಹಣಕಾಸು ವರ್ಷದಲ್ಲಿ ನಬಾರ್ಡ್‌ನಿಂದ ವಿತರಣೆಯಾದ ಮೊತ್ತ ೨೫ ಸಾವಿರದ ೧೮೦ ಕೋಟಿಗೆ ತಲುಪಿದೆ. ೨೧ ಸಾವಿರದ ೫೬೦ ಕೋಟಿ ಬ್ಯಾಂಕ್‌ಗಳಿಗೆ ಮತ್ತು ನಬಾರ್ಡ್ ಆರ್‌ಐಡಿಎಫ್ ಅಡಿಯಲ್ಲಿ ಕರ್ನಾಟಕ ಸರ್ಕಾರದ ಪ್ರಮುಖ ಮೂಲಸೌಕರ್ಯಕ್ಕೆ ೩ ಸಾವಿರದ ೬೨೯ ಕೋಟಿ ನೀಡಿದೆ ಎಂದು ತಿಳಿಸಿದ್ದಾರೆ. ಕರ್ನಾಟಕ ಪ್ರಾದೇಶಿಕ ಕಚೇರಿ ಮುಖ್ಯ ವ್ಯವಸ್ಥಾಪಕ ಡಾ.ಸುರೇಂದ್ರ ಬಾಬು ಮಾತನಾಡಿ, ಪ್ರಸಕ್ತ ಹಣಕಾಸು ವರ್ಷದಲ್ಲಿ ನಬಾರ್ಡ್ ೪.೯೯ ಲಕ್ಷ ಕೋಟಿ ಸಾಲ ಸಾಮರ್ಥ್ಯವನ್ನು ಅಂದಾಜಿಸಿದೆ ಎಂದು ತಿಳಿಸಿದ್ದಾರೆ. ೨೦೨೬-೨೭ನೇ ಹಣಕಾಸು ವರ್ಷಕ್ಕಾಗಿ ರಾಜ್ಯ ನಿರ್ಧಿಷ್ಟ ಪತ್ರ ಬಿಡುಗಡೆ ಮಾಡಿದ್ದು, ಇದು ೨೦೨೫-೨೬ಕ್ಕೆ ನೀಡಿದ ಅಂದಾಜಿಗಿಂತ ಶೇಕಡ ೧೨ರಷ್ಟು ಹೆಚ್ಚಾಗಿದೆ ಎಂದು ಹೇಳಿದ್ದಾರೆ. ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಕ್ಷೇತ್ರದಲ್ಲಿ ಅಭಿವೃದ್ಧಿ ಹಣಕಾಸು ಸಂಸ್ಥೆಯಾಗಿ ನಬಾರ್ಡ್ ಗ್ರಾಮೀಣ ಸಾಲ ಪರಿಸರವನ್ನು ಬೆಳೆಸಲು ಹಲವಾರು ಉಪಕ್ರಮವನ್ನು ಕೈಗೊಂಡಿದೆ ಎಂದು ತಿಳಿಸಿದ್ದಾರೆ.

<><*<><>*><>

ರಾಜ್ಯದ ರೈಲ್ವೆ ಯೋಜನೆಗಳಿಗೆ ೫೨ ಸಾವಿರ ಕೋಟಿ ರೂಪಾಯಿಗಳನ್ನು ಕೇಂದ್ರ ಸರ್ಕಾರ ಬಿಡುಗಡೆ ಮಾಡಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ತುಮಕೂರು-ದಾವಣಗೆರೆ ರೈಲ್ವೆ ಮಾರ್ಗದ ಕಾಮಗಾರಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ರಾಜ್ಯದಲ್ಲಿ ಕಳೆದ ೨೫ ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ಎಲ್ಲಾ ರೈಲ್ವೆ ಯೋಜನೆಗಳನ್ನು ಪೂರ್ಣಗೊಳಿಸುವುದಾಗಿ ಭರವಸೆ ನೀಡಿದ್ದಾರೆ. ರಾಯದುರ್ಗ-ತುಮಕೂರು, ತುಮಕೂರು ದಾವಣಗೆರೆಯ ಸುಮಾರು ೪೦೦ಕ್ಕೂ ಹೆಚ್ಚು ಕಿಲೊಮೀಟರ್ ರೈಲ್ವೆ ಯೋಜನೆಯನ್ನು ೨೦೨೮ರ ಫೆಬ್ರವರಿ ಒಳಗೆ ಮುಗಿಸಲು ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ.

<><*<><>*><>

ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಶಾಸಕ ಸ್ಥಾನ ಅಸಿಂಧುಗೊಳಿಸಿ ಹೈ-ಕೋರ್ಟ್ ನೀಡಿದ್ದ ಆದೇಶಕ್ಕೆ ಸುಪ್ರೀಂ ಕೋರ್ಟ್ ಇಂದು ಮಧ್ಯಂತರ ತಡೆ ನೀಡಿದೆ. ಪ್ರತಿಸ್ಪರ್ಧಿ, ಚುನಾವಣಾ ಆಯೋಗ ಮತ್ತು ಸಂಬಂಧಪಟ್ಟ ವ್ಯಕ್ತಿಗಳಿಗೆ ಅಫಿಡವಿಟ್ ಸಲ್ಲಿಸಲು ನ್ಯಾಯಾಲಯ ೬ ವಾರಗಳ ಕಾಲಾವಕಾಶ ನೀಡಿದೆ. ಸುಪ್ರೀಂಕೋರ್ಟ್ ಆದೇಶವನ್ನು ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಸ್ವಾಗತಿಸಿದ್ದಾರೆ.

<><*<><>*><>

ಬೆಂಗಳೂರಿನ ವಿಶ್ವವಿಖ್ಯಾತ ಕರಗ ಶಕ್ತ್ಯೋತ್ಸವ ಏಪ್ರಿಲ್ ೧ರ ಮಧ್ಯರಾತ್ರಿ ನಡೆಯಲಿದೆ ಎಂದು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದರ ಮೊದಲ ಭಾಗವಾಗಿ ಮಾರ್ಚ್ ೩೧ರಂದು ಹಸಿ ಕರಗ ನಡೆಯಲಿದೆ. ೧೧ ದಿನಗಳ ಕಾಲ ನಡೆಯುವ ಕರಗದಲ್ಲಿ ೧೬ನೇ ಬಾರಿಗೆ ಅರ್ಚಕ ಎ.ಜ್ಞಾನೇಂದ್ರ ಸ್ವಾಮಿ ಕರಗ ಹೊರಲಿದ್ದಾರೆ. ಮಾರ್ಚ್ ೨೪ರಂದು ಧ್ವಜಾರೋಹಣದ ಮೂಲಕ ಕರಗ ಉತ್ಸವಕ್ಕೆ ಚಾಲನೆ ದೊರೆಯಲಿದೆ ಎಂದು ಅವರು ಹೇಳಿದ್ದಾರೆ. ಈ ಬಾರಿ ಮೈಸೂರು ದಸರಾ ಮಾದರಿಯಲ್ಲಿ ದೀಪಾಲಂಕಾರ ಕೈಗೊಳ್ಳಲು ತೀರ್ಮಾನ ತೆಗೆದುಕೊಳ್ಳಲಾಗಿದೆ.

<><*<><>*><>

ಯಾವುದೇ ಟೀಕೆ ಟಿಪ್ಪಣಿ ಬಂದರೂ ಗ್ಯಾರೆಂಟಿ ಯೋಜನೆಗಳನ್ನು ಸ್ಥಗಿತಗೊಳಿಸುವುದಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ತುಮಕೂರಿನಲ್ಲಿ ನಡೆದ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳಿಂದ ರಾಜ್ಯದಲ್ಲಿ ರೈತರ ಆತ್ಮಹತ್ಯೆ ಸಂಖ್ಯೆ ಕಡಿಮೆಯಾಗಿದೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಬಡತನ ನಿರ್ಮೂಲನೆ ಸರ್ಕಾರದ ಉದ್ದೇಶ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ನಾಳೆ ರಾಷ್ಟ್ರೀಯ ವಿಜ್ಞಾನ ದಿನವನ್ನು ಆಚರಿಸಲಾಗುತ್ತಿದೆ. ಇದು ಸರ್.ಸಿ.ವಿ.ರಾಮನ್ ಅವರ ನೋಬೆಲ್ ಪ್ರಶಸ್ತಿ ವಿಜೇತ ರಾಮನ್ ಪರಿಣಾಮದ ಆವಿಷ್ಕಾರದ ೯೮ನೇ ವಾರ್ಷಿಕೋತ್ಸವವನ್ನು ಸ್ಮರಿಸುತ್ತಿದೆ. ಈ ಹಿನ್ನೆಲೆಯಲ್ಲಿ ರಾಮನ್ ಸಂಶೋಧನಾ ಸಂಸ್ಥೆ ನಾಳೆ ರಾಷ್ಟ್ರೀಯ ವಿಜ್ಞಾನ ದಿನವನ್ನು ಆಚರಿಸಲಿದೆ. ವಿಶೇಷ ವೈಜ್ಞಾನಿಕ ಪ್ರದರ್ಶನ ಮಳಿಗೆಗಳ ಮೂಲಕ ಸಂಸ್ಥೆಯು ಅತ್ಯಾಧುನಿಕ ಸಂಶೋಧನೆಯನ್ನು ಪ್ರದರ್ಶಿಸಲಿದೆ. ಬೆಂಗಳೂರು ಸುತ್ತಮುತ್ತಲಿನ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಳ್ಳಲಿದ್ದಾರೆ.

**<><*<><>*><>**

ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ದಾಖಲಾಗುವ ದೂರುಗಳಿಗೆ ತ್ವರಿತ ಕ್ರಮ ಕೈಗೊಳ್ಳಲು ಜಿಲ್ಲಾ ಮಟ್ಟದಲ್ಲಿ ಕಂಟ್ರೋಲ್ ರೂಂ ಆರಂಭಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ತಿಳಿಸಿದ್ದಾರೆ. ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಕೊರತೆ ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದ್ದು, ಮುಂದಿನ ಮೂರು ತಿಂಗಳು ವಿಶೇಷ ಸಹಾಯವಾಣಿ ವ್ಯವಸ್ಥೆ ಜಾರಿಗೊಳಿಸಲಾಗಿದೆ. ಜಿಲ್ಲಾಮಟ್ಟ ಹಾಗೂ ತಾಲ್ಲೂಕುವಾರು ನೋಡಲ್ ಅಧಿಕಾರಿಗಳು ಮತ್ತು ಸಿಬ್ಬಂದಿ ನೇಮಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><*<><>*><>**

ಹುಬ್ಬಳ್ಳಿಯಲ್ಲಿ ನಡೆಯುತ್ತಿರುವ ಕರ್ನಾಟಕ ಹಾಗೂ ಜಮ್ಮು-ಕಾಶ್ಮೀರ ನಡುವಿನ ರಣಜಿ ಟ್ರೋಫಿಯ ಫೈನಲ್ ಪಂದ್ಯದ ೪ನೇ ದಿನ ಜಮ್ಮು-ಕಾಶ್ಮೀರ ೪ ವಿಕೆಟ್ ನಷ್ಟಕ್ಕೆ ೧೮೬ ರನ್‌ಗಳಿಸಿದೆ. ಈ ಮೂಲಕ ಜಮ್ಮು-ಕಾಶ್ಮೀರ ೪೭೭ ರನ್‌ಗಳ ಮುನ್ನಡೆ ಸಾಧಿಸಿದೆ. ಮೊದಲನೇ ಇನ್ನಿಂಗ್ಸ್‌ನಲ್ಲಿ ಕರ್ನಾಟಕ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೨೯೩ರನ್ ಗಳಿಸಿದೆ.  ನಾಳೆ ಈ ಐತಿಹಾಸಿಕ ಪಂದ್ಯ ವೀಕ್ಷಿಸಲು ಜಮ್ಮು-ಕಾಶ್ಮೀರ ಮುಖ್ಯಮಂತ್ರಿ ಓಮರ್ ಅಬ್ದುಲ್ಲಾ ಹುಬ್ಬಳ್ಳಿಗೆ ಆಗಮಿಸಲಿದ್ದಾರೆ.

**<><*<><>*><>**

ಕೋಲಾರ ಜಿಲ್ಲೆಯಲ್ಲಿ ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಕಲಬೆರಕೆ ಹಾಲು ಮಾರಾಟ ಹಾಗೂ ಕಲುಷಿತ ಕುಡಿಯುವ ನೀರನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ತಿಳಿಸಿದ್ದಾರೆ.  ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯ ಕೆ.ಜಿ.ಎಫ್, ಮುಳಬಾಗಿಲು ಮತ್ತು ಶ್ರೀನಿವಾಸಪುರ ಭಾಗದ ಗಡಿ ಪ್ರದೇಶಗಳಲ್ಲಿ ಆಂಧ್ರಪ್ರದೇಶದ ಕೆಲವು ಖಾಸಗಿ ಕಂಪನಿಗಳು ಕಲಬೆರಕೆ ಹಾಲು ಸರಬರಾಜು ಮಾಡುತ್ತಿರುವುದು ಗಮನಕ್ಕೆ ಬಂದಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**